# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 733 (775)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀ ಕೆ. ಶಿವಕುಮಾರ್ (ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಉತ್ತರಿಸುವ ದಿನಾಂಕ : 10.03.2026

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೆ.ಜಿ.ಎಫ್ ನಗರದಲ್ಲಿ ನೂತನ ಕೈಗಾರಿಕೆಗಳ ಸ್ಥಾಪನೆ ಮಾಡುವ ಚಿಂತನೆ ಸರ್ಕಾರಕ್ಕೆ ಇದೆಯೇ; ಇದ್ದರೆ, ಎಷ್ಟು ಪ್ರಮಾಣ ಹೂಡಿಕೆ ಮಾಡಲು ಉದ್ದೇಶಿಸಿದೆ ಹಾಗೂ ಎಷ್ಟು ಪ್ರದೇಶದಲ್ಲಿ ಕೈಗಾರಿಕೆಗಳು ಅಭಿವೃದ್ಧಿಪಡಿಸಲಾಗುತ್ತಿದೆ; ಇದರಿಂದ ಎಷ್ಟು ಜನರಿಗೆ ಉದ್ಯೋಗ ದೊರಕಲಿದೆ; (ಮಾಹಿತಿ ನೀಡುವುದು) | ಸರ್ಕಾರವು ನೇರವಾಗಿ ಯಾವುದೇ ಕೈಗಾರಿಕೆಗಳನ್ನು ಸ್ಥಾಪಿಸುವುದಿಲ್ಲ. ಆದರೆ, ಖಾಸಗಿ ಕಂಪನಿಗಳು ಕೈಗಾರಿಕೆಗಳನ್ನು ಸ್ಥಾಪಿಸಲು ಮುಂದೆ ಬಂದಲ್ಲಿ ಬೆಂಬಲ ಸೇವೆ ನೀಡಲಾಗುತ್ತದೆ.<br><br>ಕೋಲಾರ ಜಿಲ್ಲೆ ಕೆ.ಜಿ.ಎಫ್ ಕೈಗಾರಿಕಾ ಪ್ರದೇಶದಲ್ಲಿ ದಿನಾಂಕ: 12.11.2025ರಂದು ನಡೆದ 156ನೇ ರಾಜ್ಯ ಮಟ್ಟದ ಏಕಗವಾಕ್ಷಿ (SLSWCC) ಅನುಮೋದನಾ ಸಮಿತಿ ಸಭೆಯಲ್ಲಿ ಒಟ್ಟು 8 ಯೋಜನೆಗಳಿಗೆ ಅನುಮೋದನೆ ನೀಡಲಾಗಿದ್ದು, ರೂ.1015.65 ಕೋಟಿ ಬಂಡವಾಳ ಹೂಡಿಕೆ ಮತ್ತು 2,474 ಉದ್ಯೋಗ ಸೃಜನೆ ನಿರೀಕ್ಷಿಸಲಾಗಿದೆ. |
| ಆ | ಕೆ.ಜಿ.ಎಫ್ ನಲ್ಲಿ ಹೂಡಿಕೆದಾರರನ್ನು ಸೆಳೆಯಲು ನೆರೆಯ ಆಂಧ್ರಪ್ರದೇಶ ಹಾಗೂ ತಮಿಳುನಾಡಿನಲ್ಲಿ ರೋಡ್ ಶೋ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | ದೇಶ-ವಿದೇಶಗಳ ಹಲವಾರು ಪ್ರತಿಷ್ಠಿತ ಕಂಪನಿಗಳೊಂದಿಗೆ ಕರ್ನಾಟಕದಲ್ಲಿ ಬಂಡವಾಳ ಹೂಡಲು ಸಭೆ / ರೋಡ್ ಶೋಗಳನ್ನು ನಡೆಸಲಾಗುತ್ತಿದೆ. |
| ಇ | ಪ್ರಸ್ತುತ ಎಷ್ಟು ಕೈಗಾರಿಕೆಗಳು ಚಾಲ್ತಿಯಲ್ಲಿದೆ; ಎಷ್ಟು ಜನರಿಗೆ ಉದ್ಯೋಗ ದೊರಕಿದೆ? | ಮೇಲಿನ (ಅ) ರಲ್ಲಿ ಅನುಮೋದನೆಗೊಂಡ ಯೋಜನೆಗಳು ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಾಗಿರುವುದರಿಂದ ಅನುಷ್ಠಾನಕ್ಕೆ ಕನಿಷ್ಠ 3 ರಿಂದ 5 ವರ್ಷ ಬೇಕಾಗುತ್ತದೆ |

**ಸಿಐ 45 ಎಸ್‌ಪಿಐ 2026**

(**ಎಂ.ಬಿ. ಪಾಟೀಲ**)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು